ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 123(1091)

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 25-02-2022

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ. ಸಂ.	ಪ್ರಶ್ನೆಗಳು	ಉತ್ತರ
(ಅ)	ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿ ಕ್ಷೇತ್ರಗಳ ಮರು ವಿಂಗಡಣೆ ಮತ್ತು ಮೀಸಲಾತಿ ನಿಗದಿಗೆ ಸರ್ಕಾರ ಯಾವ ದಿನಾಂಕದಂದು ಅಧಿಸೂಚನೆ ಹೊರಡಿಸಿದೆ;	ಅಧಿಸೂಚನೆ ಹೊರಡಿಸಿರುವುದಿಲ್ಲ.
(ಆ)	ಮರು ವಿಂಗಡಣೆ ಮತ್ತು ಮೀಸಲಾತಿ ನಿಗದಿಗೊಳಿಸುವಲ್ಲಿ ಪ್ರಸ್ತುತ ಅನುಸರಿಸುತ್ತಿರುವ ಮಾನದಂಡಗಳೇನು; (ವಿವರ ನೀಡುವುದು)	ಪಂಚಾಯತ್ ಕ್ಷೇತ್ರಗಳ ಸೀಮಾ ನಿರ್ಣಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 319 ಜಿಪಸ 2021, ದಿನಾಂಕ:13-10-2021ರನ್ವಯ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿದ್ದು, ಸದರಿ ಆಯೋಗವು ಈ ನಿಟ್ಟಿನಲ್ಲಿ ಕಾರ್ಯನಿರತವಾಗಿರುತ್ತದೆ. ಕ್ಷೇತ್ರಗಳ ಮರುವಿಂಗಡಣೆಗೆ ಸಂಬಂಧಿಸಿದಂತೆ ಆಯೋಗವು ಅವರ ಸ್ವಂತ ಕಾರ್ಯವಿಧಾನವನ್ನು ನಿರ್ಧರಿಸಿಕೊಳ್ಳುತ್ತದೆ.
(ಇ)	ಮರುವಿಂಗಡಣೆ ಕಾರ್ಯ ಯಾವ ಹಂತದಲ್ಲಿದೆ:	ಆಯೋಗವು ಪ್ರಥಮ ಹಂತದ ಪ್ರಕ್ರಿಯೆಯ ಭಾಗವಾಗಿ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಭೆಯನ್ನು ನಡೆಸಿರುತ್ತದೆ. ಜಿಲ್ಲಾಧಿಕಾರಿಗಳಿಂದ ಜಿಲ್ಲೆಯ ಹಾಗೂ ತಾಲ್ಲೂಕು ವ್ಯಾಪ್ತಿಯ ಜನಸಂಖ್ಯೆ ವರದಿಯನ್ನು ಪಡೆದು ಪರಿಶೀಲಿಸಲಾಗುತ್ತಿದೆ. ಈ ಸಂಬಂಧವಾಗಿ ರಾಜ್ಯ ಚುನಾವಣಾ ಆಯೋಗದ ಕಾರ್ಯದರ್ಶಿಗಳು, ಕಾನೂನು ಇಲಾಖೆಯ ಅಧಿಕಾರಿಗಳು ಮತ್ತು ಇನ್ನಿತರೆ ಅಧಿಕಾರಿಗಳೊಂದಿಗೆ ಸಭೆಗಳನ್ನು ನಡೆಸಲಾಗಿರುತ್ತದೆ.
(ಈ)	ಜನಪ್ರತಿನಿಧಿಗಳು ಇಲ್ಲದಿರುವುದರಿಂದ ಗ್ರಾಮೀಣ ಪ್ರದೇಶದ ಅಭಿವೃದ್ಧಿ ಹಾಗು	ಬಂದಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 321ರಲ್ಲಿ ಪ್ರದತ್ತವಾದ

	ಜನಸಾಮಾನ್ಯರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಅಧಿಕಾರವನ್ನು ಚಲಾಯಿಸಿ, ಸರ್ಕಾರವು ಆದೇಶ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021 ದಿನಾಂಕ: 26-04-2021 ಹಾಗೂ ತಿದ್ದುಪಡಿ ಆದೇಶ ದಿನಾಂಕ: 28-04-2021ರಲ್ಲಿ ಕರ್ನಾಟಕ ಗ್ರಾಮ್ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 239ರನ್ವಯ ರಾಜ್ಯದ ಜಿಲ್ಲಾ ಪಂಚಾಯತಿ ಹಾಗು ತಾಲ್ಲೂಕು ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿರುತ್ತದೆ. ಸದರಿ ಆಡಳಿತಾಧಿಕಾರಿಗಳು ಪ್ರಕರಣ 239(2)ರನ್ವಯ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿಯ ಹಾಗೂ ಸಂಬಂಧಪಟ್ಟ ಅಧ್ಯಕ್ಷರುಗಳು ನಿರ್ವಹಿಸಬೇಕಾದ ಎಲ್ಲಾ ಅಧಿಕಾರಗಳು ಮತ್ತು ಕರ್ತವ್ಯಗಳನ್ನು ನೆರವೇರಿಸಲು ಅಧಿಕಾರ ಹೊಂದಿರುತ್ತಾರೆ. ಆಡಳಿತಾಧಿಕಾರಿಗಳ ಅವಧಿಯನ್ನು ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021 ದಿನಾಂಕ: 29-10-2021ರಲ್ಲಿ ಮತ್ತೆ ಮುಂದಿನ 6 ತಿಂಗಳು ಅಥವಾ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಚುನಾವಣೆ ನಡೆಯುವವರೆಗೆ ವಿಸ್ತರಿಸಲಾಗಿರುತ್ತದೆ. ರಾಜ್ಯದ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಿರುವುದರಿಂದ ಹಾಗೂ ಜನಸಮಾನ್ಯರ ತೊಂದರೆಗಳನ್ನು ಪರಿಶೀಲಿಸಿ ಬಗೆಹರಿಸಲು ಆಡಳಿತಾಧಿಕಾರಿಗಳಿಗೆ ಅಧಿಕಾರ ಇರುವುದರಿಂದ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗಿರುವುದಿಲ್ಲ.
(ಉ)	ಯಾವ ಕಾಲಮಿತಿಯಲ್ಲಿ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿಗಳಿಗೆ ಚುನಾವಣೆ ನಡೆಸಲಾಗುವುದು?	ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ನಿಯಮಾನುಸಾರ ಪರಿಶೀಲಿಸಿ ಸರ್ಕಾರಕ್ಕೆ ಸೂಕ್ತ ವರದಿಯನ್ನು ಸಲ್ಲಿಸಿದ ನಂತರ ವರದಿಯನ್ನು ಪರಿಶೀಲಿಸಿ ಚುನಾವಣೆ ನಡೆಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಗ್ರಾಅಪಂರಾ 91 ಜಿಪಸ 2022

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.